## 2. ಸಚಿನ್ ಪೈಲಟ್‌ಗೆ ಅನರ್ಹತೆ ಭೀತಿ

ರಾಜಸ್ಥಾನ ರಾಜಕೀಯದಲ್ಲಿ ಏಕಾಏಕಿ ಸಂಚಲನ ಸೃಷ್ಟಿಸಿದ ಸಚಿನ್ ಪೈಲಟ್ ನೇತೃತ್ವದ ಬಂಡಾಯ ಶಾಸಕರು ಈಗ ಅನರ್ಹತೆಯ ಭೀತಿ ಎದುರಿಸುವಂತಾಗಿದೆ. ಡಿಸಿಎಂ ಹಾಗೂ ರಾಜ್ಯಾಧ್ಯಕ್ಷ ಹುದ್ದೆಯಿಂದ ವಜಾಗೊಂಡ ಯುವ ನಾಯಕ ಸಚಿನ್ ಪೈಲಟ್ ಹಾಗೂ ಇತರೆ 18 ಬಂಡಾಯ ಶಾಸಕರಿಗೆ ರಾಜಸ್ಥಾನ ಸ್ಪೀಕರ್ ನೋಟಿಸ್ ಜಾರಿ ಮಾಡಿದ್ದಾರೆ.

**ನೋಟಿಸ್ ಜಾರಿ:** ವಿಪ್ ಉಲ್ಲಂಘಿಸಿ, ಶಾಸಕಾಂಗ ಪಕ್ಷದ ಸಭೆಗೆ ಗೈರಾಗಿರುವ ನಿಮ್ಮನ್ನು ವಿಧಾನಸಭೆಯಿಂದ ಅನರ್ಹಗೊಳಿಸಬಾರದೇಕೆ ಎಂದು ಪ್ರಶ್ನಿಸಿ ನೋಟಿಸ್ ಜಾರಿ ಮಾಡಲಾಗಿದ್ದು, ಇದಕ್ಕೆ ಉತ್ತರಿಸುವಂತೆ ಸೂಚಿಸಲಾಗಿದೆ. ಅಸೆಂಬ್ಲಿಯ ಮುಖ್ಯ ಸಚೇತಕ ಮಹೇಶ್ ಜೋಷಿ, ಸ್ಪೀಕರ್ ಸಿ.ಪಿ.ಜೋಷಿ ಅವರಿಗೆ ಪತ್ರ ಬರೆದು, ಸಂವಿಧಾನದ 10ನೇ ಪರಿಚ್ಛೇದದನ್ವಯ ಬಂಡಾಯ ಶಾಸಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದರು. ಪಕ್ಷ ವಿರೋಧಿ ಚಟುವಟಿಕೆ, ಪಕ್ಷದ ಹಿತಾಸಕ್ತಿಗೆ ವಿರುದ್ಧವಾದ ಕ್ರಿಯೆ, ಭ್ರಷ್ಟಾಚಾರ ಹಾಗೂ ಲಂಚದ ಮೂಲಕ ಸರ್ಕಾರವನ್ನು ಪತನಗೊಳಿಸುವ ಯತ್ನ ನಡೆಸಿದ್ದಾರೆ ಎಂಬ ಆರೋಪವನ್ನೂ ಮಹೇಶ್ ಜೋಷಿ ಹೊರಿಸಿದ್ದರು.

**ಹೋಟೆಲಿಂದ ಹೊರಡಿ, ಜೈಪುರಕ್ಕೆ ಬನ್ನಿ:** ಸುರ್ಜೇವಾಲ ಸಂಜೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ಕಾಂಗ್ರೆಸ್ ನಾಯಕ ರಣದೀಪ್ ಸುರ್ಜೇವಾಲ, ಬಿಜೆಪಿಗೆ ಸೇರ್ಪಡೆಗೊಳ್ಳುವುದಿಲ್ಲ ಎಂದು ಮಾಧ್ಯಮದವರಿಗೆ ನೀವು ಕೊಟ್ಟಿರುವ ಹೇಳಿಕೆಯನ್ನು ನಾವು ಗಮನಿಸಿದ್ದೇವೆ. ಅದು ನಿಜವೆಂದರೆ, ಹರಿಯಾಣದ ಬಿಜೆಪಿ ನೇತೃತ್ವದ ಸರ್ಕಾರದ ವ್ಯಾಪ್ತಿಯಲ್ಲಿರುವ ಹೋಟೆಲಿನಿಂದ, ಅವರ ಭದ್ರತೆಯಿಂದ ಹೊರಬನ್ನಿ, ಬಿಜೆಪಿ ನಾಯಕರೊಂದಿಗೆ ಮಾತುಕತೆ ನಡೆಸುವುದನ್ನು ನಿಲ್ಲಿಸಿ. ಜೈಪುರಕ್ಕೆ ವಾಪಸ್ಸಾಗಿ. ನಿಮ್ಮ ಅಭಿಪ್ರಾಯವನ್ನು ನೇರವಾಗಿ ನಮ್ಮ ಮುಂದೆ ಬಂದು ತಿಳಿಸಿ ಎಂದು ಹೇಳಿದ್ದಾರೆ. ರಾಜಸ್ಥಾನದ ಉಸ್ತುವಾರಿ, ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅವಿನಾಶ್ ಪಾಂಡೆ, ಕಾಂಗ್ರೆಸ್ ಪಕ್ಷದ ಬಾಗಿಲು ಪೈಲಟ್ ಅವರಿಗೆ ಇನ್ನೂ ಮುಚ್ಚಿಲ್ಲ, ದೇವರು ಅವರಿಗೆ ಒಳ್ಳೆಯ ಬುದ್ಧಿ ಕೊಡಲಿ. ತಮ್ಮ ತಪ್ಪನ್ನು ಅರಿತುಕೊಂಡು ಅವರು ವಾಪಸ್ ಬರಲಿ ಎಂದು ಹೇಳಿದ್ದಾರೆ.

**ಪೈಲಟ್‌ರಿಂದ ಕುದುರೆ ವ್ಯಾಪಾರ: ಗೆಹ್ಲೋಟ್ ಆರೋಪ:** ಕಾಂಗ್ರೆಸ್ ಬಂಡಾಯ ನಾಯಕ ಸಚಿನ್ ಪೈಲಟ್ ಅವರು ಬಿಜೆಪಿ ಜೊತೆ ಕೈಜೋಡಿಸಿ ಕುದುರೆ ವ್ಯಾಪಾರದಲ್ಲಿ ತೊಡಗಿದ್ದಾರೆ ಎಂಬ ಗಂಭೀರ ಆರೋಪವನ್ನು ಸಿಎಂ ಅಶೋಕ್ ಗೆಹ್ಲೋಟ್ ಮಾಡಿದ್ದಾರೆ. ಸರ್ಕಾರವನ್ನು ಪತನಗೊಳಿಸುವ ಉದ್ದೇಶದಿಂದ ಸ್ವತಃ ಕಾಂಗ್ರೆಸ್ ಪ್ರದೇಶ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷರೇ ಶಾಸಕರ ಖರೀದಿಯಲ್ಲಿ ತೊಡಗಿರುವುದಕ್ಕೆ ನನ್ನಲ್ಲಿ ಸಾಕ್ಷ್ಯಗಳಿವೆ ಎಂದು ಹೇಳಿದ್ದಾರೆ.

**ಜಿಲ್ಲಾ ಬ್ಲಾಕ್ ಸಮಿತಿ ವಿಸರ್ಜನೆ:** ಈ ಎಲ್ಲ ಬೆಳವಣಿಗೆಗಳ ನಡುವೆಯೇ, ರಾಜಸ್ಥಾನ ಕಾಂಗ್ರೆಸ್ ತನ್ನ ಎಲ್ಲಾ ಜಿಲ್ಲಾ ಮತ್ತು ಬ್ಲಾಕ್ ಮಟ್ಟದ ಸಮಿತಿಗಳನ್ನು ವಿಸರ್ಜಿಸಿ, ಪಕ್ಷದ ಎಲ್ಲ ಘಟಕಗಳನ್ನು ಪುನಃರಚಿಸಲು ಮುಂದಾಗಿದೆ. ರಾಜ್ಯ ಕಾಂಗ್ರೆಸ್ ಉಸ್ತುವಾರಿ ಅವಿನಾಶ್ ಪಾಂಡೆ ಈ ವಿಚಾರ ತಿಳಿಸಿದ್ದು, ಸದ್ಯದಲ್ಲೇ ಹೊಸ ಸಮಿತಿಗಳನ್ನು ರಚಿಸಲಾಗುವುದು ಎಂದಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:16.07.2020